ಅಸಲು ದಾವಾ ನಂ:09/2020
ಪಿ.ಡಬ್ಲ್ಯೂ:01

**<u>ದಿನಾಂಕ: 21-10-2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

<u>ಮುಂದುವರೆದ ಪಾಟೀ ಸವಾಲು: ಶ್ರೀ ಎಚ್.ಎನ್.ಎನ್., ಪ್ರತಿವಾದಿ ಪರ ವಕೀಲರಿಂದ</u>

ಈ ದಾವೆಯನ್ನು ಹೊರತುಪಡಿಸಿ ದಾವೆ ವಸ್ತು ವಿಷಯಕ್ಕೆ ಸಂಬಂಧಿಸಿದಂತೆ ನನ್ನ ಹಾಗೂ ಪ್ರತಿವಾದಿಯ ನಡುವೆ ಈ ಹಿಂದೆ ಯಾವುದೇ ದಾವೆಗಳನ್ನು ಹೂಡಿರುವುದಿಲ್ಲ. ಮಾನ್ಯ ಜಿಲ್ಲಾಧಿಕಾರಿಗಳು, ಮಾನ್ಯ ಹಿಂದೂ ಧಾರ್ಮಿಕ ದತ್ತಿ ಇಲಾಖೆಯ ಮುಂದೆ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರತಿವಾದಿ ಹಾಗೂ ನನ್ನ ನಡುವೆ ಯಾವುದೇ ಪ್ರಕರಣಗಳು ದಾಖಲಿಸಿರುವುದಿಲ್ಲ. ಉಳಿದ ವಾದಿಯರು ನನಗೆ ದೊಡ್ಡಪ್ಪ ಹಾಗೂ ಚಿಕ್ಕಪ್ಪನ ಮಕ್ಕಳಾಗಬೇಕು. 6 ಮತ್ತು 7 ನೇ ವಾದಿಯರು ಸ್ವಂತ ಅಣ್ಣ-ತಮ್ಮಂದಿರು ಎಂದರೆ ಸರಿ. ಉಳಿದ 1 ರಿಂದ 5 ನನ್ನ ದೊಡ್ಡಪ್ಪ ಹಾಗೂ ಚಿಕ್ಕಪ್ಪನ ಮಕ್ಕಳು ಎಂದರೆ ಸರಿ. 1 ನೇ ಪ್ರತಿವಾದಿಯು ಪಣಿಯಪ್ಪನ ವಂಶಸ್ಥರಲ್ಲ ಹಾಗೂ ವಾದಿಯರು ಮಾತ್ರ ಪಣಿಯಪ್ಪನ ವಂಶಸ್ಥರು ಎಂದು ತೋರಿಸಲು ದಾಖಲೆಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ನಾವು ವಂಶವೃಕ್ಷವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಸಾಕ್ಷಿಯು ನಿಶಾನೆಗಳಾಗಿ ಗುರುತಿಸಿರುವ ದಾಖಲೆಗಳನ್ನು ಪರಿಶೀಲಿಸಿ ನಾವು ಕೊಟ್ಟಿರುವ ದಾಖಲೆಗಳು ಇರುವುದಿಲ್ಲ. ಮುಂದಿನ ವಿಚಾರಣೆಯಲ್ಲಿ ದಾಖಲೆಗಳನ್ನು ಹಾಜರುಪಡಿಸುತ್ತೇನೆ ಎಂದು ನುಡಿಯುತ್ತಾರೆ. ನಾವು 1 ನೇ ಪ್ರತಿವಾದಿಯ ವಿರುದ್ಧ ಪೊಲೀಸ ಠಾಣೆಯಲ್ಲಿ ದಾಖಲಿಸಿರುವ ದೂರಿನ ಮೂಲ ಪ್ರತಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ತೊಂದರೆ ಇರುವುದಿಲ್ಲ.

**( ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಪಾಟೀ ಸವಾಲನ್ನು ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ.